# ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ : ಕೇಂದ್ರ ಕಛೇರಿ : ಬೆಂಗಳೂರು

## (ಸಾರ್ವಜನಿಕ ಸಂಪರ್ಕ ಇಲಾಖೆ)

## ಪತ್ರಿಕಾ ಪ್ರಕಟಣೆ

**********

**ಬಸವ ಜಯಂತಿ/ಕಾರ್ಮಿಕರ ದಿನಾಚರಣೆ ಪ್ರಯುಕ್ತ ಕರಾರಸಾ ನಿಗಮದಿಂದ ವಿಶೇಷ ಸಾರಿಗೆ ವ್ಯವಸ್ಥೆ**

ಕರಾರಸಾ ನಿಗಮದ ವತಿಯಿಂದ ಪ್ರಸ್ತುತ ಕಾರ್ಯಾಚರಣೆ ಮಾಡಲಾಗುತ್ತಿರುವ ಅನುಸೂಚಿತ ಸಾರಿಗೆಗಳ ಜೊತೆಗೆ ಬಸವ ಜಯಂತಿ/ಕಾರ್ಮಿಕರ ದಿನಾಚರಣೆ ಪ್ರಯುಕ್ತ ದಿನಾಂಕ: 28/04/2017 ರಿಂದ 30/04/2017ರಂದು ಉಂಟಾಗುವ ಸಂಚಾರ ಒತ್ತಡಕ್ಕನುಗುಣವಾಗಿ **450 ರಿಂದ 500** ಹೆಚ್ಚುವರಿ ವಾಹನಗಳ ವಿಶೇಷ ಸಾರಿಗೆ ವ್ಯವಸ್ಥೆ ಮಾಡಲಾಗಿದೆ. **ನಂತರ ರಾಜ್ಯದ ಮತ್ತು ಅಂತರರಾಜ್ಯದ ವಿವಿಧ ಸ್ಥಳಗಳಿಂದ ಬೆಂಗಳೂರಿಗೆ ದಿನಾಂಕ: 01/05/2017ರಂದು ವಿಶೇಷ ವಾಹನಗಳನ್ನು ಕಾರ್ಯಾಚರಣೆ ಮಾಡಲಾಗುವುದು.**

**********

- ಕೆಂಪೇಗೌಡ ಬಸ್ ನಿಲ್ದಾಣದಿಂದ ಧರ್ಮಸ್ಥಳ, ಕುಕ್ಕೆಸುಬ್ರಮಣ್ಯ, ಶಿವಮೊಗ್ಗ, ಹಾಸನ, ಮಂಗಳೂರು, ಕುಂದಾಪುರ, ಶೃಂಗೇರಿ, ಹೊರನಾಡು, ದಾವಣಗೆರೆ, ಹುಬ್ಬಳ್ಳಿ, ಧಾರವಾಡ, ಬೆಳಗಾವಿ, ವಿಜಯಪುರ, ಗೋಕರ್ಣ, ಶಿರಸಿ, ಕಾರವಾರ, ರಾಯಚೂರು, ಕಲಬುರಗಿ, ಬಳ್ಳಾರಿ, ಕೊಪ್ಪಳ, ಯಾದಗೀರ್, ಬೀದರ್, ತಿರುಪತಿ, ಪಾವಗಡ, ಹೊಸದುರ್ಗ ಮುಂತಾದ ಸ್ಥಳಗಳಿಗೆ ವಿಶೇಷ ಕಾರ್ಯಾಚರಣೆ.
- ಮೈಸೂರು ರಸ್ತೆ ಬಸ್ ನಿಲ್ದಾಣದಿಂದ ಮೈಸೂರು, ಹುಣಸೂರು, ಪಿರಿಯಾಪಟ್ಟಣ, ವಿರಾಜಪೇಟೆ, ಕುಶಾಲನಗರ, ಮಡಿಕೇರಿ ಮಾರ್ಗದ ಕಡೆ ಕಾರ್ಯಾಚರಣೆ.
- ತಮಿಳುನಾಡು ಮತ್ತು ಆಂಧ್ರಪ್ರದೇಶ ಕಡೆಗೆ ಅಂದರೆ ಮಧುರೈ, ಕುಂಭಕೋಣಂ, ತಿರುಚಿ, ಚೆನ್ನೈ, ಕೊಯಮತ್ತೂರು, ತಿರುಪತಿ, ವಿಜಯವಾಡ, ಹೈದರಾಬಾದ್ ಮುಂತಾದ ಸ್ಥಳಗಳಿಗೆ ಹೋಗುವ ಪ್ರತಿಷ್ಠಿತ ಸಾರಿಗೆಗಳನ್ನು ಶಾಂತಿನಗರದ ಬಿಎಂಟಿಸಿ ಬಸ್ ನಿಲ್ದಾಣದಿಂದ ವಿಶೇಷ ಕಾರ್ಯಾಚರಣೆ ಮಾಡಲಾಗುವುದು.
- **ಸಾರ್ವಜನಿಕ ಪ್ರಯಾಣಿಕರ ಅನುಕೂಲಕ್ಕಾಗಿ ಹೆಚ್ಚುವರಿ ಸಾರಿಗೆಗಳಿಗೆ ಮುಂಗಡವಾಗಿ ಆಸನಗಳನ್ನು ಕಾಯ್ದಿರಿಸುವ ಸೌಲಭ್ಯಗಳನ್ನು ಕಲ್ಪಿಸಲಾಗಿದೆ.**
- **ಪ್ರಯಾಣಿಕರು ಬಸ್ ನಿಲ್ದಾಣಗಳಿಗೆ ತೆರಳುವ ಮುನ್ನ ಮುಂಗಡ ಕಾಯ್ದಿರಿಸಲಾಗಿರುವ ಟಿಕೇಟುಗಳ ಮೇಲೆ ನಮೂದಿಸಲಾಗಿರುವ ಬಸ್ ನಿಲ್ದಾಣ/ಪಿಕ್‌ಅಪ್ ಪಾಯಿಂಟ್‌ನ ಹೆಸರನ್ನು ಗಮನಿಸುವಂತೆ ಕೋರಲಾಗಿದೆ.**
- ಇ–ಟಿಕೇಟ್ ಬುಕ್ಕಿಂಗ್‌ನ್ನು www.ksrtc.in ವೆಬ್ ಸೈಟ್ ಮುಖಾಂತರ ಮಾಡಬಹುದಾಗಿದೆ.
- ಸಾರ್ವಜನಿಕ ಪ್ರಯಾಣಿಕರು ಬೆಂಗಳೂರು ನಗರದಲ್ಲಿರುವ **148,** ಮೈಸೂರು ನಗರದಲ್ಲಿರುವ **18** ಹಾಗೂ ಮಂಗಳೂರಿನಲ್ಲಿರುವ **34** ಹಾಗೂ ರಾಜ್ಯದ ಇತರೆ ಸ್ಥಳಗಳಲ್ಲಿರುವ 230 ಗಣಕೀಕೃತ ಬುಕಿಂಗ್ ಕೌಂಟರ್‌ಗಳ ಮೂಲಕ ಮುಂಗಡವಾಗಿ ಆಸನಗಳನ್ನು ಕಾಯ್ದಿರಿಸಬಹುದಾಗಿದೆ.

- ನಾಲ್ಕು ಅಥವಾ ಹೆಚ್ಚು ಪ್ರಯಾಣಿಕರು ಒಟ್ಟಾಗಿ ಮುಂಗಡ ಕಾಯ್ದಿರಿಸಿದಲ್ಲಿ **ಶೇಕಡ 5** ರಷ್ಟು ರಿಯಾಯಿತಿ ನೀಡಲಾಗುವುದು ಹಾಗೂ ಹೋಗುವ & ಬರುವ ಪ್ರಯಾಣದ ಟಿಕೇಟ್‌ನ್ನು ಒಟ್ಟಿಗೆ ಕಾಯ್ದಿರಿಸಿದಾಗ ಬರುವ ಪ್ರಯಾಣ ದರದಲ್ಲಿ **ಶೇಕಡ 10** ರಷ್ಟು ರಿಯಾಯಿತಿ ನೀಡಲಾಗುವುದು.
- ನೆರೆ ರಾಜ್ಯಗಳಾದ ತಮಿಳುನಾಡು, ಆಂಧ್ರಪ್ರದೇಶ, ತೆಲಂಗಾಣ, ಕೇರಳ, ಗೋವಾ, ಮಹಾರಾಷ್ಟ್ರ ಹಾಗೂ ಪುದುಚೇರಿಯ ಪ್ರಮುಖ ನಗರಗಳಲ್ಲಿ ನಿಗಮದ ಮುಂಗಡ ಆಸನಗಳನ್ನು ಕಾಯ್ದಿರಿಸುವ ಕೌಂಟರ್‌ಗಳು ಇದ್ದು, ಇವುಗಳ ಮೂಲಕ ಸಹ ಮುಂಗಡವಾಗಿ ಆಸನಗಳನ್ನು ನಿಗಮದ ಸಾರಿಗೆಗಳಿಗೆ ಕಾಯ್ದಿರಿಸಬಹುದಾಗಿದೆ.
- ಕಾರ್ಯಾಚರಣೆ ಮಾಡಲಾಗುವ ಹೆಚ್ಚುವರಿ ಸಾರಿಗೆಗಳು, ಅವುಗಳು ಹೊರಡುವ ಸ್ಥಳ ಹಾಗೂ ವೇಳಾ ವಿವರಗಳನ್ನು ಮುಂಗಡವಾಗಿ ಆಸನಗಳನ್ನು ಕಾಯ್ದಿರಿಸುವ ಅಂತರ್‌ಜಾಲ ವ್ಯವಸ್ಥೆಯಲ್ಲಿ ಹಾಗೂ ಕರಾರಸಾ ನಿಗಮದ ವೆಬ್‌ಸೈಟ್‌ನಲ್ಲಿ ಸಾರ್ವಜನಿಕರ ಮಾಹಿತಿಗಾಗಿ ಒದಗಿಸಲಾಗಿದೆ ಹಾಗೂ ಸದರಿ ಹೆಚ್ಚುವರಿ ಸಾರಿಗೆಗಳಲ್ಲಿ ಸಂಚರಿಸುವ ಪ್ರಯಾಣಿಕರು ಕಾಯ್ದಿರಿಸುವ ಮುಂಗಡ ಚೀಟಿಗಳಲ್ಲೂ ಕೂಡ ವಾಹನ ಹೊರಡುವ ಸ್ಥಳದ ವಿವರ ನಮೂದಿಸಲಾಗಿದೆ.
- ಅಲ್ಲದೇ, ನಿಗಮದ ಕಾರ್ಯಾಚರಣೆ ವ್ಯಾಪ್ತಿಯಲ್ಲಿನ ಎಲ್ಲಾ ತಾಲ್ಲೂಕು/ಜಿಲ್ಲಾ ಬಸ್ ನಿಲ್ದಾಣಗಳಿಂದ ಸಂಚಾರ ಒತ್ತಡಕ್ಕನುಗುಣವಾಗಿ ವಿಶೇಷ ಸಾರಿಗೆಗಳ ಕಾರ್ಯಾಚರಣೆ ಮಾಡಲಾಗುವುದು.

ಮೇಲ್ಕಂಡ ಮಾರ್ಗಗಳಲ್ಲಿ ಸಾರಿಗೆಯನ್ನು ಕಾರ್ಯಾಚರಣೆ ಮಾಡುತ್ತಿರುವ ಬಗ್ಗೆ ಸಾರ್ವಜನಿಕ ಪ್ರಯಾಣಿಕರುಗಳ ಮಾಹಿತಿಗಾಗಿ ಪ್ರಮುಖ ದಿನಪತ್ರಿಕೆಗಳಲ್ಲಿ ಪ್ರಕಟಣೆ ನೀಡುವ ವ್ಯವಸ್ಥೆ ಮಾಡುವಂತೆ ಕೋರಲಾಗಿದೆ.

ತಮ್ಮ ವಿಶ್ವಾಸಿ,
–ಸಹಿ–
ಸಾರ್ವಜನಿಕ ಸಂಪರ್ಕಾಧಿಕಾರಿ